ಬೆಳ್ತಂಗಡಿ ತಾಲ್ಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರ

ಶ್ರೀ ಕೆ. ವಸಂತಬಂಗೇರ (ಬೆಳ್ತಂಗಡಿ).—ಮಾನ್ಯ ಆರೋಗ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ ?

ಅ) ಬೆಳ್ತಂಗಡಿ ತಾಲ್ಲೂಕಿನಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಹಾಗೂ ಪ್ರಾಥಮಿಕ ಆರೋಗ್ಯ ಘಟಕಗಳಲ್ಲಿ ವೈದ್ಯರ ಹಾಗೂ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಈ ಕೊರತೆಗಳನ್ನು ನೀಗಲು ಏನು ಕ್ರಮ ಕೈಗೊಳ್ಳಲಾಗಿದೆ ಮತ್ತು ಕೊರತೆಯನ್ನು ಎಷ್ಟು ಸಮಯದೊಳಗೆ ನೀಗಿಸಲಾಗುವುದು?

ಇ) ಹೊಸದಾಗಿ ಈ ತಾಲ್ಲೂಕಿನಲ್ಲಿ ಆರೋಗ್ಯ ಕೇಂದ್ರವನ್ನಾಗಲೀ ಘಟಕಗಳನ್ನಾಗಲೀ ತೆರೆಯಲು ಸರ್ಕಾರದವರು ಉದ್ದೇಶಿಸಿದ್ದಾರೆಯೇ ?

ಈ) ಬೆಳ್ತಂಗಡಿ ತಾಲ್ಲೂಕಿನ ಉಜಿರೆ ಗ್ರಾಮದಲ್ಲಿ ಮಂಗನ ಕಾಯಿಲೆಗೋಸ್ಕರ ಕಟ್ಟಿಸಿದ ಆಸ್ಪತ್ರೆಯ ಕಟ್ಟಡದಲ್ಲಿ ಆರೋಗ್ಯ (ಪ್ರಾಥಮಿಕ) ಕೇಂದ್ರವನ್ನು ತೆರೆಯಲು ಉದ್ದೇಶಿಸಲಾಗಿದೆಯೇ ?

ಉ) ಹಾಗಿದ್ದಲ್ಲಿ ಅದನ್ನು ಯಾವಾಗ ಪ್ರಾರಂಭಿಸಲಾಗುವುದು ?

ಶ್ರೀ ಹೆಚ್. ಎಲ್. ತಿಮ್ಮೇಗೌಡ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು).—

(ಅ) ಬಂದಿದೆ

ಆ) ಪ್ರಾಥಮಿಕ ಆರೋಗ್ಯ ಕೇಂದ್ರ ಬೆಳ್ತಂಗಡಿ ಮತ್ತು ನೆರಿಯಾಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಸ್ನಾತಕೋತ್ತರ ಶಿಕ್ಷಣ ಮಂಗಿಸಿ ಬರುವ ವೈದ್ಯರುಗಳಿಂದ ತುಂಬಲಾಗುವುದು

ತಾಲ್ಲೂಕು ಅಭಿವೃದ್ಧಿ ಮಂಡಳಿಗಳಿಂದ ಸರ್ಕಾರದವರು ವಹಿಸಿಕೊಂಡಿರುವ ಪ್ರಾಥಮಿಕ ಆರೋಗ್ಯ ಘಟಕಗಳಾದ ವೇಣೂರು ಮತ್ತು ಅಲ್ದಂಗಡಿಗಳಲ್ಲಿ ಮೂರನೆಯ ದರ್ಜೆಯ ವೈದ್ಯರ ಹುದ್ದೆಗಳಿವೆ. ಈಗ ಇನೇ ದರ್ಜೆಯ ವೈದ್ಯರನ್ನು ನೇಮಕ ಮಾಡುತ್ತಿಲ್ಲ. ಆದರೂ ಬೇರೆ ಕಡೆಯಿಂದ ವರ್ಗ ಮಾಡುವ ವಿಷಯವನ್ನು ಪರಿಶೀಲಿಸಲಾಗುತ್ತದೆ. ಉಳಿದ ಹುದ್ದೆಗಳನ್ನು ಬೇಗ ತುಂಬಲು ಸೂಕ್ತ ಕ್ರಮ ತೆಗೆದುಕೊಳ್ಳಲಾಗುವುದು.

ಇ) ಸದ್ಯಕ್ಕೆ ಇಲ್ಲ.

ಈ) ಇಲ್ಲ

ಉ) ಉದ್ಭವಿಸುವುದಿಲ್ಲ.

Expenditure incurred on Printing & Publications of Public Sector Enterprises Boards & Corporation

SRI B. BASAVALINGAPPA (Yelahanka).—Will the Chief Minister be pleased to state ?

Total expenditure incurred on Printing & Publications of Public Sector Undertakings Boards & Corporation ?